**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ಬಂಗಾರಪೇಟೆ**

**ಸಿಸಿ ಸಂಖ್ಯೆ:2543/2022** **ಚಾಸಾ:1 ಪ್ರಾಸಾ:1**

**ಸಾಕ್ಷಿಯನ್ನು ದಿ:04.04.2025 ರಂದು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು**

| | |
|---|---|
| **ಹೆಸರು :** | ಸಿದ್ಧಮಲ್ಲೇಶ್ |
| ತಂದೆಯ **ಹೆಸರು:** | ಲೇಟ್ ಶಿವಾನಂದ |
| **ವಯಸ್ಸು:** | 62 ವರ್ಷ |
| **ವೃತ್ತಿ:** | ವ್ಯಾಪಾರ |
| **ವಾಸ ಸ್ಥಳ:** | ಬಂಗಾರಪೇಟೆ ತಾಲ್ಲೂಕು. |

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ಮೃತ ವ್ಯಕ್ತಿ ನನ್ನ ತಂದೆ. ಅರೋಪಿಯನ್ನು ನಾನು ನೋಡಿಲ್ಲ. ಚಾಸಾ.2 ನನ್ನ ತಾಯಿ , ಚಾಸಾ.3 ನನ್ನ ತಂಗಿ , ಚಾಸಾ.4 ನನ್ನ ಹೆಂಡತಿ , ಚಾಸಾ.5 ರಿಂದ ಚಾಸಾ.10 ಪರಿಚಯ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿದ್ದು , ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು , ಆ ದಾಖಲೆಯ ಪಿರ್ಯಾದಿ ಆಗಿದ್ದು , ಅದನ್ನು ನಿಪಿ.1 ಎಂದು , ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿದ್ದು , ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು , ಆ ದಾಖಲೆಯ ಸ್ಥಳ ಪಂಚನಾಮೆಯಾಗಿದ್ದು , ಅದನ್ನು ನಿಪಿ.2 ಎಂದು, ಸಾಕ್ಷಿಯ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಮತ್ತೊಂದು ದಾಖಲೆಯನ್ನು ತೋರಿಸಲಾಗಿದ್ದು , ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು , ಆ ದಾಖಲೆಯ ಕ್ಷತಬಂಧ ಪತ್ರವಾಗಿದ್ದು , ಅದನ್ನು ನಿಪಿ.3 ಎಂದು, ಸಾಕ್ಷಿಯ ಸಹಿಯನ್ನು ನಿಪಿ.3(ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಯಾವ ವಿಚಾರಕ್ಕೆ ಹಾಕಿದ್ದೇನೆಂದು ನನಗೆ ನೆನಪಿಲ್ಲ. ಅರೋಪಿ ಅತಿವೇಗ ಮತ್ತು ಅಜಾಗರೂಕತೆಯಿಂದ ವಾಹನ ಚಲಾಯಿಸಿ ಡಿಕ್ಕಿ ಹೊಡೆದ ಪರಿಣಾಮ ನನ್ನ ತಂದೆ ಮೃತಪಟ್ಟಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಎಪಿಪಿ ರವರು ಕೋರಿರುತ್ತಾರೆ. ಅದರಂತೆ ಅನುಮತಿ ನೀಡಿದೆ.)**

**<u>ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ದಿಃ 16.09.2022 ರಂದು ಸಂಜೆ 6.15 ಗಂಟೆ ಸಮಯದಲ್ಲಿ ನನ್ನ ತಂದೆ ಶಿವಾನಂದ ರವರು ಮನೆಗೆ ಬರುವ ಸಲುವಾಗಿ ಗಂಗಾ ಎಸ್ಟೇಟ್ ಮುಂಭಾಗ ನನ್ನ ಟಿವಿಎಸ್ ಹೆವಿ ಡ್ಯೂಟಿ ದ್ವಿಚಕ್ರ ವಾಹನ ಸಂಖ್ಯೆ ಕೆಎ.04 ಕೆಎಫ್–2041 ವಾಹನವನ್ನು ಕೋಲಾರ ಬಂಗಾರಪೇಟೆ ಮುಖ್ಯರಸ್ತೆಯ ಎಡಭಾಗದಲ್ಲಿ ಚಲಾಯಿಸಿಕೊಂಡು ಬರುತ್ತಿದ್ದಾಗ ಅರೋಪಿ ತನ್ನ ವಾಹನವಾದ ಕಾರ್ ಸಂಖ್ಯೆ ಕೆಎ.01–ಎಂ.ಟಿ.2823 ವಾಹನವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಮೃತನ ಟಿವಿಎಸ್ ಹೆವಿ ಡ್ಯೂಟಿ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮ ಮೃತನು ವಾಹನ ಸಮೇತ ರಸ್ತೆಯ ಮೇಲೆ ಬಿದ್ದು ತಲೆಯ ಹಿಂಭಾಗ ಮತ್ತು ಎಡಕೈ ಬಳಿ ರಕ್ತಗಾಯಗಳು ಆಗಿದ್ದು ಚಿಕಿತ್ಸೆಗಾಗಿ ಆಸ್ಪತ್ರೆಗೆ ಸಾಗಿಸುವ ಮಾರ್ಗದ ಮಧ್ಯೆ ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ.

ದಿಃ 17.09.2022 ರಂದು ನನ್ನ ಮತ್ತು ಚಾಸಾ.9 ಮತ್ತು 10 ರವರ ಸಮಕ್ಷಮ ವಾಹನಗಳನ್ನು ಅಮಾನತ್ತುಪಡಿಸಿಕೊಂಡು ಬೆಳಿಗ್ಗೆ 11.30 ರಿಂದ 12.30 ರವರೆಗೂ ನಿಪಿ.2 ರಂತೆ ಮಹಜರ್ ಕ್ರಮ ಜರುಗಿಸಿದರು ಮಾಡಿದರು ಎಂದರೆ ಸರಿಯಲ್ಲ. ಅರೋಪಿಯೊಡನೆ ರಾಜೀ ಮಾಡಿಕೊಂಡಿದ್ದೇನೆ ಎಂದರೆ ಸರಿ, ಆದ ಕಾರಣ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)**

**ಓ ಹೇ ಕೇ ಸರಿ ಇದೆ.**

**ಪ್ರಭಾರ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಬಂಗಾರಪೇಟೆ.**